**All India Radio: Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**03.05.2026 / 6.40 p.m.**

*******************

ಮುಖ್ಯಾಂಶಗಳು

೧. ಕೇಂದ್ರ ಸರ್ಕಾರದ ಇಎಸ್‌ಐಸಿ ಯೋಜನೆಯಿಂದ ೧೫ ಕೋಟಿ ಜನರಿಗೆ ಆರೋಗ್ಯ-ಸಾಮಾಜಿಕ ಭದ್ರತೆ ; ಸಚಿವ ಮನ್ಸುಖ್ ಮಾಂಡವೀಯ

೨. ನಾಳೆ ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಉಪಚುನಾವಣೆ ಮತ ಎಣಿಕೆ

೩. ತುಂಗಭದ್ರಾ ಅಣೆಕಟ್ಟು ಕ್ರೆಸ್ಟ್ ಗೇಟ್ ದುರಸ್ತಿ ಕಾರ್ಯ ಅಂತಿಮ ಹಂತಕ್ಕೆ ; ಇದೇ ೧೫ಕ್ಕೆ ಲೋಕಾರ್ಪಣೆಗೆ ಸಿದ್ಧತೆ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೪. ಯಾದಗಿರಿಯಲ್ಲಿ ಬಿಸಿಗಾಳಿ ; ಮುನ್ನೆಚ್ಚರಿಕೆ ಕ್ರಮವಾಗಿ ಯೆಲ್ಲೋ ಅಲರ್ಟ್ ಘೋಷಣೆ

೫. ಐಟಿಪಿ ೩೫ ಎಟಿಪಿ ರ್‍ಯಾಂಕಿಂಗ್ ತುಮಕೂರು ಓಪನ್ ಮಹಿಳಾ ಚಾಂಪಿಯನ್ ಶಿಪ್ ; ನಾಡಿದ್ದು ಆರಂಭ

---

ಕಾರ್ಮಿಕರ ಹಿತಾಸಕ್ತಿ ಕಾಪಾಡಲು ಕೇಂದ್ರ ಸರ್ಕಾರ ಹಲವಾರು ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ದೇಶದ ೧೫ ಕೋಟಿ ಜನರಿಗೆ ಇಎಸ್‌ಐಸಿ ಮೂಲಕ ಸಾಮಾಜಿಕ ಭದ್ರತೆ ನೀಡಲಾಗುತ್ತಿದೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವೀಯ ಹೇಳಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ಬಾಶೆಟ್ಟಿಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ನಿರ್ಮಾಣಗೊಂಡಿರುವ ೧೦೦ ಹಾಸಿಗೆ ಸಾಮರ್ಥ್ಯದ ಇಎಸ್‌ಐಸಿ ಆಸ್ಪತ್ರೆಯನ್ನು ಇಂದು ಉದ್ಘಾಟಿಸಿ ಅವರು ಮಾತನಾಡಿದರು.

ಆರೋಗ್ಯ ಭದ್ರತೆಯು ಸಾಮಾಜಿಕ ಭದ್ರತೆಯ ಪ್ರಮುಖ ಭಾಗವಾಗಿದ್ದು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕಳೆದ ೧೦ ವರ್ಷಗಳಲ್ಲಿ ಈ ಹಿಂದೆ ೭ ಕೋಟಿ ಇದ್ದ

ಇಎಸ್‌ಐಸಿ ಸೌಲಭ್ಯವನ್ನು ಈಗ ೧೫ ಕೋಟಿ ಜನರಿಗೆ ನೀಡಿದೆ. ೪೦ ವರ್ಷ ಮೇಲ್ಪಟ್ಟ ಕಾರ್ಮಿಕರಿಗೆ ಆರೋಗ್ಯ ತಪಾಸಣಾ ಶಿಬಿರ ನಡೆಸಲಾಗುತ್ತಿದೆ ಎಂದರು.

ಕೇಂದ್ರದ ೪ ಕಾರ್ಮಿಕ ಸಂಹಿತೆಗಳನ್ನು ಜಾರಿ ಮಾಡುವ ಮೂಲಕ ಕಾರ್ಮಿಕರಿಗೆ ಸೇವಾ ಭದ್ರತೆ, ಸಮಾನ ಕೆಲಸಕ್ಕೆ ಸಮಾನ ವೇತನ ಮೊದಲಾಗಿ ಕಾರ್ಮಿಕರ ಹಿತ ಕಾಪಾಡಲಾಗುತ್ತಿದೆ ಎಂದು ಅವರು ಹೇಳಿದರು.

ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಮಾತನಾಡಿ, ಇಎಸ್‌ಐಸಿ ಆಸ್ಪತ್ರೆ ಇಂದು ಕೇಂದ್ರ ಸರ್ಕಾರದ ಸಹಕಾರದಿಂದ ಉದ್ಘಾಟನೆಯಾಗಿದೆ. ಇಎಸ್‌ಐಸಿ ಆಸ್ಪತ್ರೆಯಲ್ಲಿ ಎಲ್ಲಾ ರೀತಿಯ ಚಿಕಿತ್ಸೆ ದೊರೆಯುವಂತೆ ಕ್ರಮ ವಹಿಸಲಾಗುತ್ತಿದೆ. ಆದಾಗ್ಯೂ ಹೆಚ್ಚಿನ ಚಿಕಿತ್ಸೆಗೆ ಬೇರೆ ಆಸ್ಪತ್ರೆಗೆ ಶಿಫಾರಸ್ಸು ಮಾಡಿದರೆ ಚಿಕಿತ್ಸೆ ವೆಚ್ಚವನ್ನು ಇಲಾಖೆ ಭರಿಸಲಿದೆ. ದೇಶದ ೧೭ ಇಎಸ್‌ಐಸಿ ಮೆಡಿಕಲ್ ಕಾಲೇಜುಗಳಲ್ಲಿ ಕಾರ್ಮಿಕರ ಮಕ್ಕಳಿಗೆ ೭೦೨ ಸೀಟುಗಳನ್ನು ಮೀಸಲಿರಿಸಲಾಗಿದೆ ಎಂದು ತಿಳಿಸಿದರು.

ಇದೇ ಕಾರ್ಯಕ್ರಮದಲ್ಲಿ ಬಳ್ಳಾರಿಯ ಇಎಸ್‌ಐಸಿ ಆಸ್ಪತ್ರೆ ನಿರ್ಮಾಣಕ್ಕೆ ಶಂಕುಸ್ಥಾಪನೆಯನ್ನು ಸಚಿವ ಡಾ. ಮನ್ಸುಖ್ ಮಾಂಡವೀಯ ವರ್ಚುವಲ್ ಮೂಲಕ ನೆರವೇರಿಸಿದರು.

ಸಂಸದ ಡಾ. ಕೆ ಸುಧಾಕರ್, ಶಾಸಕ ಧೀರಜ್ ಮುನಿರಾಜು, ಮೊದಲಾದ ಗಣ್ಯರು ಭಾಗವಹಿಸಿದ್ದರು.

---

ಕಳೆದ ತಿಂಗಳ ೯ರಂದು ಮತದಾನ ನಡೆದ ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆ ಕಾರ್ಯ ನಾಳೆ ನಡೆಯಲಿದೆ.

ದಾವಣಗೆರೆ ದಕ್ಷಿಣ ಮತಕ್ಷೇತ್ರದ ಶಾಸಕರಾಗಿದ್ದ ಶಾಮನೂರು ಶಿವಶಂಕರಪ್ಪ ಹಾಗೂ ಬಾಗಲಕೋಟೆ ಮತ ಕ್ಷೇತ್ರದ ಶಾಸಕರಾಗಿದ್ದ ಎಚ್.ವೈ.ಮೇಟಿ ಅವರ ನಿಧನದಿಂದಾಗಿ ತೆರವಾದ ಸ್ಥಾನಗಳಿಗಾಗಿ ಉಪಚುನಾವಣೆ ನಡೆದಿದೆ.

---

ಬಾಗಲಕೋಟೆ ವಿಧಾನಸಭಾ ಕ್ಷೇತ್ರಕ್ಕೆ ನಡೆದ ಉಪಚುನಾವಣೆಯ ಮತ ಎಣಿಕೆಗೆ ಜಿಲ್ಲಾಡಳಿತ ಸಕಲ ಸಿದ್ಧತೆಗಳನ್ನು ಪೂರ್ಣಗೊಳಿಸಿದೆ.

ನಾಳೆ ಬೆಳಗ್ಗೆ ೮ ಗಂಟೆಯಿಂದ ನಗರದ ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿ ಮತ ಎಣಿಕೆ ಕಾರ್ಯ ಆರಂಭವಾಗಲಿದೆ. ಮತ ಎಣಿಕೆಗಾಗಿ ೧೪ ಟೇಬಲ್‌ಗಳನ್ನು ಸಿದ್ಧಪಡಿಸಲಾಗಿದ್ದು, ಒಟ್ಟು ೨೩ ಸುತ್ತುಗಳಲ್ಲಿ ಮತ ಎಣಿಕೆ ನಡೆಯಲಿದೆ. ಈ ಕಾರ್ಯಕ್ಕೆ ೬೩ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

ಸ್ಟ್ರಾಂಗ್ ರೂಂ ಅನ್ನು ಸಿಸಿ ಟಿವಿ ಕಣ್ಗಾವಲಿನಲ್ಲಿ ಇರಿಸಲಾಗಿದ್ದು, ಭದ್ರತೆಗಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಉಪ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಸೇರಿದಂತೆ ೯೦೦ಕ್ಕೂ ಅಧಿಕ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

ಕಳೆದ ಏಪ್ರಿಲ್ ೯ ರಂದು ನಡೆದ ಮತದಾನದಲ್ಲಿ ಶೇಕಡಾ ೬೫.೫೯ ರಷ್ಟು ಮತದಾನ ದಾಖಲಾಗಿದೆ.

---

ನಾಳೆ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಮತ ಎಣಿಕೆ ಒಟ್ಟು ೨೧ ಸುತ್ತುಗಳಲ್ಲಿ ನಡೆಯಲಿದ್ದು, ಮಧ್ಯಾಹ್ನ ೧೨ ಗಂಟೆಯ ವೇಳೆಗೆ ಫಲಿತಾಂಶದ ಸಂಪೂರ್ಣ ಚಿತ್ರಣ ಹೊರಬೀಳಲಿದೆ ಎಂದು ಚುನಾವಣಾಧಿಕಾರಿಯೂ ಆದ ಉಪವಿಭಾಗಾಧಿಕಾರಿ ಸಂತೋಷ್ ಕುಮಾರ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳಿಗ್ಗೆ ೮ ಗಂಟೆಗೆ ಅಂಚೆ ಮತಪತ್ರಗಳ ಎಣಿಕೆ ಆರಂಭವಾಗಲಿದೆ. ನಂತರ ಇವಿಎಂ ಯಂತ್ರಗಳ ಮತ ಎಣಿಕೆ ಆರಂಭವಾಗಲಿದೆ ಎಂದರು.

"ಮತ ಎಣಿಕೆಗಾಗಿ ಒಟ್ಟು ೧೪ ಟೇಬಲ್‌ಗಳನ್ನು ಅಳವಡಿಸಲಾಗಿದೆ. ಪ್ರತಿ ಟೇಬಲ್‌ಗೆ ಒಬ್ಬರು ಕೌಂಟಿಂಗ್ ಸೂಪರ್‌ವೈಸರ್, ಮೈಕ್ರೋ ಅಬ್ಸರ್ವರ್, ಕೌಂಟಿಂಗ್ ಅಸಿಸ್ಟೆಂಟ್ ಹಾಗೂ ಅಗತ್ಯ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ" ಎಂದು ಅವರು ವಿವರಿಸಿದರು.

ಧ್ವನಿ : ಚುನಾವಣಾಧಿಕಾರಿ ಸಂತೋಷ್

ಮತ ಎಣಿಕೆ ಸಿಬ್ಬಂದಿ ನೇಮಕಾತಿಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಈಗಾಗಲೇ ಎರಡು ಹಂತದ ರ್‍ಯಾಂಡಮೈಸೇಶನ್ ಪ್ರಕ್ರಿಯೆ ಪೂರ್ಣಗೊಂಡಿದೆ. ಮತ ಎಣಿಕೆಯ ದಿನವಾದ ನಾಳೆ ಬೆಳಗ್ಗೆ ೫ ಗಂಟೆಗೆ ಮೂರನೇ ಹಾಗೂ ಅಂತಿಮ ಹಂತದ ರ್‍ಯಾಂಡಮೈಸೇಶನ್ ನಡೆಯಲಿದೆ. ಆ ಬಳಿಕವಷ್ಟೇ ಯಾವ ಸಿಬ್ಬಂದಿ ಯಾವ ಟೇಬಲ್‌ನಲ್ಲಿ ಕಾರ್ಯನಿರ್ವಹಿಸಬೇಕು ಎಂಬುದು ಅಂತಿಮವಾಗಲಿದೆ ಎಂದರು.

---

ತುಂಗಭದ್ರಾ ಅಣೆಕಟ್ಟಿನ ೧೯ನೇ ಕ್ರೆಸ್ಟ್ ಗೇಟ್ ತುರ್ತು ದುರಸ್ತಿ ಕಾರ್ಯಗಳು ಈಗ ಅಂತಿಮ ಹಂತ ತಲುಪಿದ್ದು, ಇದೇ ೧೫ರಂದು ಲೋಕಾರ್ಪಣೆಗೆ ಸಿದ್ಧತೆ ಮಾಡಿಕೊಳ್ಳುತ್ತಿರುವುದಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಅವರು, ಇಂದು ತುಂಗಭದ್ರಾ ಅಣೆಕಟ್ಟಿನ ಗೇಟ್ ಅಳವಡಿಕೆ ಕಾರ್ಯವನ್ನು ಖುದ್ದಾಗಿ ಪರಿಶೀಲಿಸಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿ, ಅಣೆಕಟ್ಟಿನ ಒಟ್ಟು ೩೩ ಗೇಟ್‌ಗಳ ಪೈಕಿ ೨೨ ಗೇಟ್‌ಗಳಿಗೆ ಸ್ಲೈಸ್ ಪ್ಲೇಟ್‌ಗಳನ್ನು ಅಳವಡಿಸುವ ಕಾರ್ಯ ಪೂರ್ಣಗೊಂಡಿದೆ. ತಜ್ಞರ ವರದಿಯಂತೆ ಹಳೆಯ ಚೈನ್‌ಗಳು ಸದೃಢವಾಗಿದ್ದರೂ, ಮುನ್ನೆಚ್ಚರಿಕಾ ಕ್ರಮವಾಗಿ ಹೊಸ ಚೈನ್‌ಗಳನ್ನು ಅಳವಡಿಸಲು ನಿರ್ಧರಿಸಲಾಗಿದೆ. ಮೊದಲ ಸೆಟ್ ಹೊಸ ಚೈನ್‌ಗಳು ಇದೇ ೭ರಂದು ಆಗಮಿಸಲಿದ್ದು, ಮೇ ಅಂತ್ಯದೊಳಗೆ ಚೈನ್ ಅಳವಡಿಕೆ ಕಾರ್ಯ ಸಂಪೂರ್ಣ ಪ್ರಕ್ರಿಯೆ ಮುಗಿಯಲಿದೆ. ಮುಂಬರುವ ಮಳೆಗಾಲವನ್ನು ಗಮನದಲ್ಲಿಟ್ಟುಕೊಂಡು ಇದೇ ೧೫ ರಂದು ಯೋಜನೆಯನ್ನು ಅಧಿಕೃತವಾಗಿ ಉದ್ಘಾಟಿಸಲು ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಧ್ವನಿ: ಡಿ.ಕೆ.ಶಿವಕುಮಾರ್

ಗೇಟ್‌ಗಳ ದುರಸ್ಥಿಗೆ ಸುಮಾರು ೫೪ ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ. ಇದಲ್ಲದೆ, ಕಾಲುವೆಗಳ ದುರಸ್ತಿ ಮತ್ತು ಇತರೆ ಕೆಳಹಂತದ ಕಾಮಗಾರಿಗಳಿಗೆ ಒಟ್ಟು ೩೧೫ ಕೋಟಿ ರೂಪಾಯಿ ವ್ಯಯಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಈ ಸಂದರ್ಭದಲ್ಲಿ ತಿಳಿಸಿದರು.

---

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಯಾದಗಿರಿ ಜಿಲ್ಲೆಯಲ್ಲಿ ಇಂದಿನಿಂದ ಮಂಗಳವಾರದವರೆಗೆ ಬಿಸಿಗಾಳಿ ತೀವ್ರಗೊಳ್ಳುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ 'ಯೆಲ್ಲೋ ಅಲರ್ಟ್' ಘೋಷಿಸಲಾಗಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ತಿಳಿಸಿದ್ದಾರೆ.

ಮುಂಜಾಗ್ರತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸೂಚಿಸಿದೆ. ಮಧ್ಯಾಹ್ನ ೧೨ರಿಂದ ೪ರವರೆಗೆ ಬಿಸಿಲಿನಲ್ಲಿ ಅನಗತ್ಯವಾಗಿ ಹೊರ ಹೋಗಬಾರದು. ಬಾಯಾರಿಕೆ ಇಲ್ಲದಿದ್ದರೂ ಸಾಕಷ್ಟು ನೀರು ಕುಡಿಯಬೇಕು. ಹಗುರ ಹಾಗೂ ಹತ್ತಿ ಬಟ್ಟೆ ಧರಿಸಿ,

ಟೋಪಿ, ಛತ್ರಿ, ಚಪ್ಪಲಿ, ರಕ್ಷಣಾತ್ಮಕ ಕನ್ನಡಕಗಳನ್ನು ಬಳಸುವುದು ಅವಶ್ಯಕವಾಗಿದೆ. ಬಿಸಿಲಿನ ಅವಧಿಯಲ್ಲಿ ಶ್ರಮದಾಯಕ ಕೆಲಸಗಳನ್ನು ತಪ್ಪಿಸುವಂತೆ ಸಲಹೆ ನೀಡಲಾಗಿದೆ.

ಮಜ್ಜಿಗೆ, ನಿಂಬೆ ನೀರು, ಮುಂತಾದ ದ್ರವಾಹಾರ ಸೇವನೆ ಹೆಚ್ಚಿಸಬೇಕು. ದೇಹದಲ್ಲಿ ಅಸ್ವಸ್ಥತೆ ಕಂಡುಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು ಎಂದು ಸೂಚಿಸಲಾಗಿದೆ. ಪ್ರಯಾಣಿಕರು ನೀರನ್ನು ಕಡ್ಡಾಯವಾಗಿ ತೆಗೆದುಕೊಂಡು ಹೋಗಬೇಕು. ರೈತರು ಹಾಗೂ ಕೃಷಿ ಕಾರ್ಮಿಕರು ಬೆಳಿಗ್ಗೆ ಅಥವಾ ಸಂಜೆ ವೇಳೆಯಲ್ಲಿ ಮಾತ್ರ ಹೊಲದಲ್ಲಿ ಕೆಲಸ ಮಾಡಬೇಕು ಎಂದು ತಿಳಿಸಲಾಗಿದೆ. ಜಾನುವಾರುಗಳನ್ನು ನೆರಳಿನಲ್ಲಿ ಇಟ್ಟು ಸಾಕಷ್ಟು ನೀರು ಒದಗಿಸಬೇಕು. ಮೇವು ಸುಡುವುದನ್ನು ತಪ್ಪಿಸಿ ಸಂಗ್ರಹಿಸಿಕೊಳ್ಳುವಂತೆ ರೈತರಿಗೆ ಸೂಚಿಸಲಾಗಿದೆ.

---

ಐಟಿಪಿ ೩೫ ಎಟಿಪಿ ರ್‍ಯಾಂಕಿಂಗ್ ತುಮಕೂರು ಓಪನ್ ಮಹಿಳಾ ಚಾಂಪಿಯನ್ ಶಿಪ್ ನಾಡಿದ್ದು ಆರಂಭವಾಗಲಿದೆ. ಟ್ರಯಲ್ಸ್ ಇಂದಿನಿಂದ ಪ್ರಾರಂಭಗೊಂಡಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ತುಮಕೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ೯ ದೇಶಗಳ ಕ್ರೀಡಾಪಟುಗಳು ಈ ಅಂತಾರಾಷ್ಟ್ರೀಯ ಕ್ರೀಡಾಕೂಟದಲ್ಲಿ ಭಾಗವಹಿಸಲಿದ್ದಾರೆ ಎಂದರು.

ಧ್ವನಿ : ಪರಮೇಶ್ವರ್ ( ೩೨ ಸೆಕೆಂಡ್‌ಗಳು)

ಚಾಂಪಿಯನ್ ಆದವರಿಗೆ ೨೮ ಲಕ್ಷ ರೂಪಾಯಿ ಬಹುಮಾನ ನೀಡಲಾಗುವುದು ಎಂದು ಸಚಿವ ಪರಮೇಶ್ವರ್ ತಿಳಿಸಿದರು.

_______ ಮುಕ್ತಾಯ _______